# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : **802**
ಸದಸ್ಯರ ಹೆಸರು : ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ)
ಉತ್ತರಿಸುವ ದಿನಾಂಕ : **20/09/2022**
ಉತ್ತರಿಸುವ ಸಚಿವರು : **ಮಾನ್ಯ ಪೌರಾಡಳಿತ, ಸಣ್ಣ ಕೈಗಾರಿಕೆಗಳು ಹಾಗೂ ಸಾರ್ವಜನಿಕ ಉದ್ದಿಮೆಗಳ ಸಚಿವರು**

| | ಪ್ರಶ್ನೆ | ಉತ್ತರ |
|---|---|---|
| ಅ | ಬೆಂಗಳೂರು ಉತ್ತರ ಯಲಹಂಕ ತಾಲ್ಲೂಕು, ಹುಣಸಮಾರನಹಳ್ಳಿ ಪುರಸಭೆಗೆ ಯಾವಾಗ ಅಧಿಸೂಚನೆ ಹೊರಡಿಸಲಾಯಿತು; | ಹುಣಸಮಾರನಹಳ್ಳಿ ಹಾಗೂ ಸೊಣ್ಣಪ್ಪನಹಳ್ಳಿ ಗ್ರಾಮ ಪಂಚಾಯಿತಿಯನ್ನು ಒಂದುಗೂಡಿಸಿ ಸರ್ಕಾರದ ಅಧಿಸೂಚನೆ ಸಂಖ್ಯೆ:ನಅಇ 154 ಎಂಎಲ್ಆರ್ 2020; ದಿನಾಂಕ:26/03/2021 ರಂದು ಹುಣಸಮಾರನಹಳ್ಳಿ ಪುರಸಭೆಯನ್ನಾಗಿ ಮೇಲ್ದರ್ಜೆಗೇರಿಸಲಾಗಿರುತ್ತದೆ. |
| ಆ | ಇದುವರೆವಿಗೂ ಸದರಿ ಪುರಸಭೆಗೆ ವಾರ್ಡ್ ರಚಿಸದಿರುವುದು ಸರ್ಕಾರ ಗಮನಕ್ಕೆ ಬಂದಿದೆಯೇ; | ಬಂದಿದೆ. |
| ಇ | ಇದುವರೆವಿಗೂ ಸದರಿ ಪುರಸಭೆಗೆ ಚುನಾವಣೆ ನಡೆಸದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ವಾರ್ಡ್ ವಿಂಗಡಣೆ ಅಂತಿಮಗೊಂಡ ನಂತರ ವಾರ್ಡುವಾರು ಮೀಸಲಾತಿಯನ್ನು ನಿಗದಿಪಡಿಸಿ ಚುನಾವಣೆ ನಡೆಸಲು ಕ್ರಮ ಕೈಗೊಳ್ಳಲಾಗುತ್ತದೆ. |
| ಈ | ಸದರಿ ಪುರಸಭೆಯ ವ್ಯಾಪ್ತಿಯಲ್ಲಿರುವ ಬಡಾವಣೆಗಳ ನಿವೇಶನಗಳಿಗೆ ಅನಧಿಕೃತ ಎಂದು ಖಾತೆ ನೀಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಇದನ್ನು ಸರಿಪಡಿಸಲು ತೆಗೆದುಕೊಂಡ ಕ್ರಮಗಳೇನು; | ಮೇಲ್ದರ್ಜೆಗೇರಿಸಿರುವ ಪುರಸಭೆಯಲ್ಲಿ ಪೌರಾಡಳಿತ ನಿರ್ದೇಶನಾಲಯದ ಸುತ್ತೋಲೆ ಸಂಖ್ಯೆ:ಆಂ 29 PTIS 2015-16; ದಿನಾಂಕ:20/04/2016 ರಲ್ಲಿ ಅಧಿಕೃತ ಆಸ್ತಿಗಳಿಗೆ ನಿಗದಿಪಡಿಸಿರುವ ದಾಖಲೆಗಳನ್ನು ಹೊಂದಿಲ್ಲದ ಬಡಾವಣೆಯ ಸ್ವತ್ತುಗಳು ನಿಯಮಬಾಹಿರ ಸ್ವತ್ತುಗಳಾಗಿರುವುದರಿಂದ ಇಂತಹ ಸ್ವತ್ತುಗಳು ಅಧಿಕೃತವಲ್ಲದ (ಅನಧಿಕೃತ) ಸ್ವತ್ತುಗಳೆಂದು ಪರಿಗಣಿಸಲ್ಪಡುತ್ತವೆ. ಇಂತಹ ಸ್ವತ್ತುಗಳಿಗೆ ಕರ್ನಾಟಕ ಪೌರಸಭೆಗಳ ಅಧಿನಿಯಮ 1964 ರ ಕಲಂ-107 ರನ್ವಯ ಆಸ್ತಿ ತೆರಿಗೆಗೆ ಎರಡು ಪಟ್ಟು ಸಮನಾದ ದಂಡವನ್ನು ವಿಧಿಸಲಾಗುತ್ತಿದೆ ಹಾಗೂ ಸರ್ಕಾರದ ಸುತ್ತೋಲೆ ಸಂಖ್ಯೆ.ನಅಇ 07 ಟಟಿಪಿ 2017; ದಿನಾಂಕ:22/03/2017 ರಲ್ಲಿ ಸಕ್ಷಮ ಪ್ರಾಧಿಕಾರದಿಂದ ವಿನ್ಯಾಸ ಅನುಮೋದನೆ ಪಡೆಯದೇ ಇರುವ ನಿವೇಶನಗಳಿಗೆ ಖಾತೆಯನ್ನು ನೀಡಬಾರದೆಂದು ಸೂಚನೆ ನೀಡಲಾಗಿರುತ್ತದೆ. |
| ಉ | ಯಾವ ಕಾಲಮಿತಿಯಲ್ಲಿ ಸದರಿ ಪುರಸಭೆ ವ್ಯಾಪ್ತಿಯ ನಿವೇಶನಗಳಿಗೆ ವಾರ್ಡ್ ರಚನೆ, ಚುನಾವಣೆ ಹಾಗೂ ಮೂಲಭೂತ ಸೌಲಭ್ಯಗಳನ್ನು ಕಲ್ಪಿಸಲಾಗುವುದು? | ಕೇಂದ್ರ ಜನಗಣತಿ ನಿರ್ದೇಶನಾಲಯದಿಂದ ಗ್ರಾಮೀಣ ಪ್ರದೇಶದ ವಾರ್ಡ್‌ಗಳಿಗೆ ಸಂಬಂಧಿಸಿದ ಗಣತಿದಾರರ ಬ್ಲಾಕ್‌ಗಳ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡದ ಜನಸಂಖ್ಯೆ ಮಾಹಿತಿ ಲಭ್ಯವಾದ ಕೂಡಲೇ ವಾರ್ಡುಗಳ ರಚನೆಯ ಕಾರ್ಯವನ್ನು ಪೂರ್ಣಗೊಳಿಸಲಾಗುತ್ತದೆ. |

| | | |
|---|---|---|
| | | ಸರ್ಕಾರದಿಂದ ವಿವಿಧ ಯೋಜನೆಗಳಲ್ಲಿ ಬಿಡುಗಡೆಯಾಗುತ್ತಿರುವ ಅನುದಾನಗಳಿಂದ ಹಾಗೂ ಪುರಸಭಾ ನಿಧಿಯಡಿಯಲ್ಲಿ ಕಾಮಗಾರಿಗಳನ್ನು ಕೈಗೊಂಡು ಆರ್ಥಿಕ ಸ್ಥಿತಿಗೆ ಅನುಗುಣವಾಗಿ ಹಂತ ಹಂತವಾಗಿ ಮೂಲಭೂತ ಸೌಕರ್ಯಗಳನ್ನು ಕಲ್ಪಿಸಲಾಗುತ್ತಿದೆ. |

**ಸಂಖ್ಯೆ:ನಅಇ 48 ಎಲ್‌ಸಿಕ್ಯೂ 2022.**

(ಎನ್. ನಾಗರಾಜು (ಎಂ.ಟಿ.ಬಿ))

**ಪೌರಾಡಳಿತ ಮತ್ತು ಸಣ್ಣ ಕೈಗಾರಿಕೆಗಳು ಹಾಗೂ**

**ಸಾರ್ವಜನಿಕ ಉದ್ದಿಮೆಗಳ ಸಚಿವರು**